ಕರ್ನಾಟಕ ಸರ್ಕಾರ

ಸಂಖ್ಯೆ: ಸಿಆಸುಇ 43 ಹೈಕಕೋ 2013

ಕರ್ನಾಟಕ ಸರ್ಕಾರ ಸಚಿವಾಲಯ,
ವಿಧಾನ ಸೌಧ,
ಬೆಂಗಳೂರು, ದಿನಾಂಕ: 10.02.2014

**ಸುತ್ತೋಲೆ**

ವಿಷಯ: ಕರ್ನಾಟಕ ಶೈಕ್ಷಣಿಕ ಸಂಸ್ಥೆಗಳ (ಹೈದ್ರಾಬಾದ್-ಕರ್ನಾಟಕ ಪ್ರದೇಶಲ್ಲಿ ಪ್ರವೇಶ ನಿಯಂತ್ರಣ) ಆದೇಶ, 2013 ಹಾಗೂ ಕರ್ನಾಟಕ ಖಾಸಗಿ ಅನುದಾನ ರಹಿತ ಶೈಕ್ಷಣಿಕ ಸಂಸ್ಥೆಗಳ (ಹೈದ್ರಾಬಾದ್-ಕರ್ನಾಟಕ ಪ್ರದೇಶದಲ್ಲಿ ಪ್ರವೇಶ ನಿಯಂತ್ರಣ) ಆದೇಶ, 2013ರನ್ವಯ ಶೈಕ್ಷಣಿಕ ಸಂಸ್ಥೆಗಳಲ್ಲಿ ಪ್ರವೇಶ ಪಡೆಯಲು ಅರ್ಹತಾ ಪ್ರಮಾಣ ಪತ್ರ ಸಲ್ಲಿಸುವ ಬಗ್ಗೆ.

******

ಕರ್ನಾಟಕ ಶೈಕ್ಷಣಿಕ ಸಂಸ್ಥೆಗಳ (ಹೈದ್ರಾಬಾದ್-ಕರ್ನಾಟಕ ಪ್ರದೇಶಲ್ಲಿ ಪ್ರವೇಶ ನಿಯಂತ್ರಣ) ಆದೇಶ, 2013 ಹಾಗೂ ಕರ್ನಾಟಕ ಖಾಸಗಿ ಅನುದಾನ ರಹಿತ ಶೈಕ್ಷಣಿಕ ಸಂಸ್ಥೆಗಳ (ಹೈದ್ರಾಬಾದ್-ಕರ್ನಾಟಕ ಪ್ರದೇಶದಲ್ಲಿ ಪ್ರವೇಶ ನಿಯಂತ್ರಣ) ಆದೇಶ, 2013ರ ಉಪಬಂಧ 5(1)ರನ್ವಯ ಶೈಕ್ಷಣಿಕ ಸಂಸ್ಥೆಗಳಲ್ಲಿ ಹೈದ್ರಾಬಾದ್-ಕರ್ನಾಟಕ ಪ್ರದೇಶದ ಸ್ಥಳೀಯ ವ್ಯಕ್ತಿಗಳೆಂದು ಮೀಸಲಿಟ್ಟ ಸೀಟುಗಳಿಗೆ ಪ್ರವೇಶ ಪಡೆಯಲು ಇಚ್ಛಿಸುವ ಅರ್ಹ ಅಭ್ಯರ್ಥಿಗಳು ಕರ್ನಾಟಕ ಸಾರ್ವಜನಿಕ ಉದ್ಯೋಗ (ಹೈದ್ರಾಬಾದ್-ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) (ಅರ್ಹತಾ ಪ್ರಮಾಣ ಪತ್ರಗಳ ನೀಡಿಕೆ) ನಿಯಮಗಳು, 2013ರಲ್ಲಿ ನಿಗಧಿಪಡಿಸಲಾದ ಅರ್ಹತಾ ಪತ್ರಗಳ ಮಾದರಿಯಲ್ಲಿಯೇ ಅರ್ಹತಾ ಪತ್ರಗಳನ್ನು ಕರ್ನಾಟಕ ಶೈಕ್ಷಣಿಕ ಸಂಸ್ಥೆಗಳ (ಹೈದ್ರಾಬಾದ್-ಕರ್ನಾಟಕ ಪ್ರದೇಶಲ್ಲಿ ಪ್ರವೇಶ ನಿಯಂತ್ರಣ) ಆದೇಶ, 2013 ಹಾಗೂ ಕರ್ನಾಟಕ ಖಾಸಗಿ ಅನುದಾನ ರಹಿತ ಶೈಕ್ಷಣಿಕ ಸಂಸ್ಥೆಗಳ (ಹೈದ್ರಾಬಾದ್-ಕರ್ನಾಟಕ ಪ್ರದೇಶದಲ್ಲಿ ಪ್ರವೇಶ ನಿಯಂತ್ರಣ) ಆದೇಶ, 2013ರ ಉಪಬಂಧ 5(1)ರನ್ವಯ ಸಕ್ಷಮ ಪ್ರಾಧಿಕಾರದಿಂದ ಪಡೆದು ಮೀಸಲಾತಿ ಪಡೆಯುವ ದಿಸೆಯಲ್ಲಿ ಪ್ರವೇಶ ನಿಯಂತ್ರಣ ಪ್ರಕ್ರಿಯೆಯಲ್ಲಿ ಪಾಲ್ಗೊಳ್ಳಬಹುದೆಂದು ಈ ಮೂಲಕ ತಿಳಿಸಲಾಗಿದೆ ಹಾಗೂ ಸಕ್ಷಮ ಪ್ರಾಧಿಕಾರಗಳು ಸಂಬಂಧಿಸಿದ ಸದರಿ ಆದೇಶಗಳ ಉಪಬಂಧ 5(1)ರಲ್ಲಿ ನಮೂದಿಸಿರುವಂತೆ ಅರ್ಹತಾ ಪ್ರಮಾಣ ಪತ್ರಗಳನ್ನು ಸಹ ಅರ್ಹ ಸ್ಥಳೀಯ ವ್ಯಕ್ತಿಗಳಿಗೆ ನೀಡಲೂ ಸಹ ತಿಳಿಸಲಾಗಿದೆ.

10.02.2014

(ಕೆ.ಎಲ್. ಲೋಕನಾಥ)
ಸರ್ಕಾರದ ಜಂಟಿ ಕಾರ್ಯದರ್ಶಿ
(ಹೈದ್ರಾಬಾದ್-ಕರ್ನಾಟಕ ವಿಶೇಷ ಕೋಶ)
ಸಿಆಸುಇ

**ಇವರಿಗೆ:**

1. ಮಾನ್ಯ ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿಗಳು.
2. ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು.
3. ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ.
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರ ಆಪ್ತ ಕಾರ್ಯದರ್ಶಿ.
6. ಮಾನ್ಯ ಅಧ್ಯಕ್ಷರು, ಸಚಿವ ಸಂಪುಟದ ಉಪ ಸಮಿತಿ ಹಾಗೂ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿ.
7. ಎಲ್ಲಾ ಇಲಾಖಾ ಮುಖ್ಯಸ್ಥರು/ಜಿಲ್ಲಾಧಿಕಾರಿಗಳು/ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು.
8. ವೆಬ್‌ಸೈಟ್/ವಾರ ಪತ್ರಿಕೆ/ಹೆಚ್ಚುವರಿ ಪ್ರತಿ /ಶಾಖಾ ರಕ್ಷಾ ಕಡತ.